**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

**O.S. No. 369/2024**

**ಸಾಕ್ಷಿಯನ್ನು ದಿನಾಂಕಃ 28.07.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿಗಳ ಪರ ಶ್ರೀ. ಬಿ.ಸಿ.ಎಂ. ವಕೀಲರಿಂದಃ**

ಈ ದಾವೆಯಲ್ಲಿ ನಾನು **3 ನೇ ವಾದಿ**ಯಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರ ಸಲ್ಲಿಸಿದ್ದು, ಸದರಿ ಪ್ರಮಾಣ ಪತ್ರದಲ್ಲಿರುವ ಅಂಶಗಳನ್ನು ನಾನೇ ಖುದ್ದಾಗಿ ಬರೆಸಿರುತ್ತೇನೆ ಹಾಗೂ ಅದರಲ್ಲಿರುವ ಅಂಶಗಳು ಸತ್ಯವೆಂದು ಪ್ರಮಾಣಿಕರಿಸುತ್ತೇನೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ನನ್ನ ದಾವೆಯ ಜೊತೆ ಕೆಲವು ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ದಿನಾಂಕಃ 04.06.1982 ರ ನೋಂದಾಯಿತ ಕ್ರಯ ಪತ್ರದ ಧೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-1** ಎಂದು, ಋಣಭಾರ ಪ್ರಮಾಣ ಪತ್ರ ಧೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-2** ಎಂದು, ಅಸೆಸ್ ಮೆಂಟ್ ಪ್ರತಿಯ ಧೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-3** ಎಂದು, 05 ಕೈ-ಬರಹದ ಪಹಣಿ ಪತ್ರಿಕೆಗಳ ಧೃಡೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿ.ಪಿ.-4** ರಿಂದ **ನಿ.ಪಿ.-8** ಎಂದು, 03 ಕಂಪ್ಯೂಟರೈಸ್ಡ್ ಪಹಣಿ ಪತ್ರಿಕೆಗಳಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿ.ಪಿ.-9** ರಿಂದ **ನಿ.ಪಿ.-11** ಎಂದು, ಅಸಲು ದಾವೆ ಸಂಖ್ಯೆ 224/2014 ರಲ್ಲಿ ಆದ ತೀರ್ಪು ಮತ್ತು ಡಿಕ್ರಿಯ ನೋಟರಿ ಧೃಡೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿ.ಪಿ.-12** ಮತ್ತು **ನಿ.ಪಿ.-13** ಎಂದು, ಪೋಲೀಸರು ನೀಡಿದ ಸ್ವೀಕೃತಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-14** ಎಂದು, ಅಸಲು ದಾವೆ ಸಂಖ್ಯೆ 224/2014 ರಲ್ಲಿನ 2 ನೇ ಪ್ರತಿವಾದಿಯ ಮುಖ್ಯ ವಿಚಾರಣೆ ಪ್ರಮಾಣ ಪತ್ರ ಹಾಗು ಪಾಟೀ ಸವಾಲಿನ ಧೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.-15** ಎಂದು, 12 ಫೋಟೋಗಳು ಮತ್ತು 01 ಸಿ.ಡಿ. ಯನ್ನು ಹಾಜರುಪಡಿಸಿದ್ದು, 12 ಫೋಟೋಗಳನ್ನು ಕ್ರಮವಾಗಿ **ನಿ.ಪಿ.-16 ರಿಂದ ನಿ.ಪಿ.-27** ಮತ್ತು 01 ಸಿ.ಡಿ. ಯನ್ನು **ನಿ.ಪಿ.-28** ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ವಾದಿಗಳ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶವನ್ನು ಕೋರಿದ್ದು, ಸಮಯಾವಕಾಶವನ್ನು ನೀಡಿ ಮುಂದೂಡಲಾಯಿತು.**

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**

**ಹೆಗ್ಗಡದೇವನಕೋಟೆ.**